ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 20 ನೇ ಮಾರ್ಚ್, 2020

ರಾಜ್ಯದಲ್ಲಿ ಮಹಿಳೆಯರ ಮತ್ತು ಮಕ್ಕಳ ಪೌಷ್ಠಿಕ ಆಹಾರ ಕುರಿತು

ಶ್ರೀ ಹೆಚ್.ಎಂ. ರಮೇಶ್ ಗೌಡ(ವಿಧಾನ ಸಭೆಯಿಂದ ಚುನಾಯಿತರಾದವರು):-

1370 (1627) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಮಹಿಳೆಯರ ಆರೋಗ್ಯ, ಮಕ್ಕಳಿಗೆ ಪೌಷ್ಠಿಕ ಆಹಾರ ಭದ್ರತೆಯ ವಿಚಾರದಲ್ಲಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ವಿವರ ನೀಡುವುದು)

(ಆ) ಪ್ರಸ್ತುತ ರಾಜ್ಯದಲ್ಲಿ ಎಷ್ಟು ಹೊಸ ಅಂಗನವಾಡಿ ಬೇಡಿಕೆ ಇದೆ; ಪ್ರಸ್ತುತ ಅಂಗನವಾಡಿ ಕೇಂದ್ರಗಳು ಸಮರ್ಪಕವಾಗಿ ಕಾರ್ಯ ನಿರ್ವಹಿಸತ್ತಿದೆಯೇ ; (ಮಾಹಿತಿ ನೀಡುವುದು)

(ಇ) ರಾಜ್ಯದ ಬರಪೀಡಿತ ಗ್ರಾಮೀಣ ಪ್ರದೇಶದ ಮಕ್ಕಳ ಅಪೌಷ್ಠಿಕತೆ ಹೋಗಲಾಡಿಸಲು ಸರ್ಕಾರದ ಮುಂದೆ ಯಾವ ಯೋಜನೆಯಿದೆ; (ವಿವರ ನೀಡುವುದು)

(ಈ) ಕಳೆದ 2 ವರ್ಷಗಳಲ್ಲಿ ರಾಜ್ಯದ ವೀಕಲಾಂಗರಿಗೆ ಎಷ್ಟು ತ್ರಿಚಕ್ರ ವಾಹನಗಳನ್ನು ಹಾಗೂ ಇತರ ಪರಿಕರಗಳನ್ನು ವಿತರಿಸಲಾಗಿದೆ; (ವಿವರ ನೀಡುವುದು)

(ಉ) ಹಿರಿಯ ನಾಗರಿಕರ ಸಬಲೀಕರಣಕ್ಕೆ ಇದುವರೆವಿಗೂ ಸರ್ಕಾರ ಖರ್ಚು ಮಾಡಿದ ಹಣವೆಷ್ಟು ; ಯಾವ ಯೋಜನೆಗಳು ಫಲಾನುಭವಿಗಳಿಗೆ ತಲುಪಿದೆ; ಯಾವ ಯೋಜನೆಗಳು ಇನ್ನೂ ಕಾರ್ಯಗತಗೊಂಡಿಲ್ಲ ? (ವಿವರ ನೀಡುವುದು)